ಈ) ಅನ್ವಯಿಸುವುದಿಲ್ಲ.

ವೈದ್ಯಕೀಯ ಕಾಲೇಜು ಸ್ಥಾಪನೆ

354(4261); ಶ್ರೀ ಮನೋಹರ್ ಎಚ್. ತಹಶೀಲ್ದಾರ್

ಅ) ಹಾವೇರಿ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯ ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಈ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಸರ್ಕಾರ ಎಷ್ಟು ಹಣ ಬಿಡುಗಡೆ ಮಾಡಿದೆ; (ವಿವರ ನೀಡುವುದು)

ಇ) ಈ ಕಾಲೇಜು ಸ್ಥಾಪನೆಗೆ ಎಲ್ಲಿ ಸ್ಥಳವನ್ನು ಗುರುತಿಸಲಾಗಿದೆ, ಹಾಗೂ ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು (ಪೂರ್ಣ ವಿವರ ನೀಡುವುದು);

ಡಾ॥ ಶರಣಪ್ರಕಾಶ್ ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು.

ಆ) ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿ ಇದೆ.

ಇ) ಹಾವೇರಿ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಕನಿಷ್ಠ 20 ಎಕರೆ ಜಮೀನು ಲಭ್ಯವಾದಲ್ಲಿ, ಅಲ್ಲಿ ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯನ್ನು ಸ್ಥಾಪಿಸಲು ಕ್ರಮವಹಿಸಲಾಗುವುದು. ಇಲ್ಲವಾದಲ್ಲಿ, ಈ ಉದ್ದೇಶಕ್ಕಾಗಿ 20 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಬೇಕಾಗುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 172 ಎಂಪಿಎಸ್ 2014 ದಿನಾಂಕ:12.06.2014 ರಲ್ಲಿ ಹಾವೇರಿಯಲ್ಲಿ 2015-16ನೇ ಸಾಲಿನಿಂದ 150 ಎಂ.ಬಿ.ಬಿ.ಎಸ್. ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಆದೇಶ ಹೊರಡಿಸಿದೆ. ವೈದ್ಯಕೀಯ ಕಾಲೇಜನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1960 ರಡಿ ನೋಂದಾಯಿಸಲು ಅನುಮತಿ ನೀಡಲಾಗಿದೆ. ಹಾವೇರಿ

ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಬೈ–ಲಾ ಮತ್ತು ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿಕೊಳ್ಳಲು ಅನುಮತಿ ನೀಡಲಾಗಿದೆ.

ಹಾವೇರಿ ಜಿಲ್ಲಾ ಆಸ್ಪತ್ರೆಯ ಪ್ರಸ್ತುತ ಇರುವ ಹಾಸಿಗೆ ಸಾಮರ್ಥ್ಯವನ್ನು 250 ರಿಂದ 300ಕ್ಕೆ ಹೆಚ್ಚಿಸಿ ತಾತ್ವಿಕ ಅನುಮೋದನೆ ನೀಡಿ ಆದೇಶ ಹೊರಡಿಸಲಾಗಿದೆ. ಕೇಂದ್ರ ಸರ್ಕಾರ ಹಾಗೂ ಭಾರತೀಯ ವೈದ್ಯಕೀಯ ಪರಿಷತ್ತಿಗೆ ಅರ್ಜಿಗಳನ್ನು ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆಸ್ಪತ್ರೆ ಉನ್ನತ್ತೀಕರಿಸುವುದು

355(4728); ಶ್ರೀ ತನ್ವೀರ್ ಸೇಠ್ (ನರಸಿಂಹರಾಜ)

ಅ) ಮೈಸೂರಿನ ಕೃಷ್ಣರಾಜ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುವ ರೋಗಿಗಳ ಸಂಖ್ಯೆಯು ದಿನೇ ದಿನೇ ಹೆಚ್ಚಾಗುತ್ತಿದ್ದು, ತುರ್ತು ಸಮಯದಲ್ಲಿ ರೋಗಿಗಳನ್ನು ದಾಖಲಿಸಿಕೊಂಡು ಸರಿಯಾದ ಚಿಕಿತ್ಸೆ ನೀಡುವುದು ಕಷ್ಟ ಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಆಸ್ಪತ್ರೆಯಲ್ಲಿನ ಹಾಸಿಗೆಗಳ ಸಂಖ್ಯೆ ಹೆಚ್ಚಿಸಲು ಹಾಗೂ ಚಿಕಿತ್ಸೆಯ ಗುಣಮಟ್ಟ ಹೆಚ್ಚಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಇ) ಮೈಸೂರಿನ ನರಸಿಂಹರಾಜ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಸುಸಜ್ಜಿತವಾದ ಸರ್ಕಾರಿ ಆಸ್ಪತ್ರೆಯು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಜನಸಂಖ್ಯೆ ಆಧಾರದ ಮೇಲೆ ನರಸಿಂಹರಾಜ ವಿಧಾನಸಭಾ ವ್ಯಾಪ್ತಿಯಲ್ಲಿ ಸರ್ಕಾರಿ ಆಸ್ಪತ್ರೆ ನಿರ್ಮಿಸಲು ಕೈಗೊಂಡಿರುವ ಕ್ರಮವೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)